ಪ್ರಮಾಣದಲ್ಲಿ ಗರ್ಭಧಾರಣೆ ಹೊಂದುವ ಸಾಧ್ಯತೆ ಇರುತ್ತದೆ. ಇದಕ್ಕೆ ವೈದ್ಯರು ಹೊಣೆಗಾರರಲ್ಲ. ಈ ರೀತಿ ಗರ್ಭಧರಿಸಿದವರಿಗೆ ಸರ್ಕಾರದಿಂದ ಪರಿಹಾರ ಕೊಡುವ ಅವಕಾಶ ಕಲ್ಪಿಸಿರುವುದಿಲ್ಲ.

ಇ) ದರ್ಜೆ	ಮಡಿಕೇರಿ	ವೀರಾಜಪೇಟೆ	ಸೋಮವಾರಪೇಟೆ	ಒಟ್ಟು
ಎ	6	13	6	25
ಬಿ	6	-	1	7
ಸಿ	63	65	65	193
ಡಿ	19	45	13	77
ಒಟ್ಟು	94	123	85	302

ಈ) ಖಾಲಿ ಇರುವ ವೈದ್ಯರ ಹಾಗೂ ಕೆಲವು ವೈದ್ಯೇತರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಜಿಲ್ಲಾಧಿಕಾರಿಗೆ ಅನುಮತಿ ನೀಡಲಾಗಿದೆ. ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ. ವೈದ್ಯೇತರ ಹಾಗೂ ತಾಂತ್ರಿಕ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ನಿಯಮಗಳನ್ನು ರಚಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಕೊಡಗು ಜಿಲ್ಲೆಯಲ್ಲಿ ಉಪಗ್ರಂಥಾಲಯ ತೆರೆಯುವುದು.

1770(2155)

ಶ್ರೀ ಅಪ್ಪಚ್ಚು ರಂಜನ್ ಎಂ.ಪಿ.(ಸೋಮವಾರಪೇಟೆ): ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯ ಹಾಗೂ ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಕೊಡಗು ಜಿಲ್ಲೆಯಲ್ಲಿ ಎಷ್ಟು ಉಪ ಗ್ರಂಥಾಲಯ ತೆರೆಯಲು ಅನುಮತಿ ನೀಡಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)

ಶ್ರೀ ಬಾಬುರಾವ್ ಚವ್ವಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯ ಹಾಗೂ ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

2000-2001ನೇ ಸಾಲಿಗೆ ಕೊಡಗು ಜಿಲ್ಲೆಯಲ್ಲಿ ಒಟ್ಟು 8 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ತೆರೆಯಲು ಅನುಮತಿ ನೀಡಲಾಗಿದೆ. ಅವುಗಳ ವಿವರ ಕೆಳಕಂಡಂತಿದೆ:

ತಾಲ್ಲೂಕು		ಗ್ರಾಮಪಂಚಾಯಿತಿ ಗ್ರಂಥಾಲಯಗಳ ಹೆಸರು
ಸೋಮವಾರ ಪೇಟೆ	1)	ಮಂಡಳಿ
	2)	ಮುಳ್ಳುಸೋಗೆ
	3)	ಪಾಲ್ಲೂರು
		ತ್ಯಾಗತ್ತೂರು
	4)	ಬ್ಯಾಡಗೊಟ್ಟ
	5)	ಹಂಡ್ಲಿ
	6)	ಕರಗಂದೂರ
ವಿರಾಜಪೇಟೆ	1)	ಬಿಟ್ಟಂಗಿ
ಮಡಿಕೇರಿ	1)	ಮರಗೋಡು

ಸೇಡಂ ತಾಲ್ಲೂಕಿನ ಹನುಮನಹಳ್ಳಿ ಗ್ರಾಮಕ್ಕೆ ಕುಡಿಯುವ ನೀರಿನ ತೊಂದರೆ.

1774(2391)

ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ (ಸೇಡಂ): ಇನ್ನಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನಲ್ಲಿ ಹಣಮನಹಳ್ಳಿ ಗ್ರಾಮಕ್ಕೆ ಕುಡಿಯುವ ನೀರಿನ ಯೋಜನೆ ಮಂಜೂರಾಗಿ ಹಣ ಖರ್ಚಾದರೂ ಸಹ ಕುಡಿಯುವ